ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 905
ಸದಸ್ಯರ ಹೆಸರು	: ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	: 13-03-2020
ಉತ್ತರಿಸುವವರು	: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ	ಹಾಸನ ಜಿಲ್ಲೆಯಲ್ಲಿರುವ ಗ್ರಾಮ ಪಂಚಾಯಿತಿಗಳಿಗೆ ಕಳೆದ 3 ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)	ಹಾಸನ ಜಿಲ್ಲೆಯಲ್ಲಿರುವ ಗ್ರಾಮ ಪಂಚಾಯಿತಿಗಳಿಗೆ ಕಳೆದ 3 ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ವಿವರ ಮತ್ತು ಅನುದಾನವನ್ನು ಖರ್ಚು ಮಾಡಿರುವ ಗ್ರಾಮ ಪಂಚಾಯಿತಿವಾರು ವಿವರವನ್ನು ಅನುಬಂಧ-1 ರಲ್ಲಿ ಮಾನ್ಯ ಸದಸ್ಯರಿಗೆ ಪ್ರತ್ಯೇಕವಾಗಿ ಸಿ.ಡಿ. ಮೂಲಕ ನೀಡಿದೆ.
ಆ	ಸರ್ಕಾರದ ಯಾವ ಯಾವ ಕಾರ್ಯಕ್ರಮ/ಯೋಜನೆಗಳಿಗಾಗಿ ಗ್ರಾಮ ಪಂಚಾಯಿತಿಗಳ ಮೂಲಕ ಜಾರಿಗೆ ಬರುತ್ತಿವೆ; ಈ ಕಾರ್ಯಕ್ರಮ/ಯೋಜನೆಗಳಿಗಾಗಿ ಕಳೆದ 3 ವರ್ಷಗಳಲ್ಲಿ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನವೆಷ್ಟು; ಇದರಲ್ಲಿ ಖರ್ಚಾದ ಅನುದಾನವೆಷ್ಟು; (ಫಲಾನುಭವಿ ವಿವರಗಳೊಂದಿಗೆ ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)	ಗ್ರಾಮ ಪಂಚಾಯತಿಗಳಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಸ್ವಚ್ಛ ಭಾರತ್ ಮಿಷನ್, ವಿವಿಧ ವಸತಿ ಯೋಜನೆಗಳಾದ ಬಸವ ವಸತಿ, ಅಂಬೇಡ್ಕರ್ ವಸತಿ, ಪ್ರಧಾನ ಮಂತ್ರಿ ಆವಾಸ್ ಯೋಜನೆ ಮತ್ತು 14ನೇ ಹಣಕಾಸು ಆಯೋಗದ ಅನುದಾನದ ಕಾರ್ಯಕ್ರಮ / ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಮೇಲ್ಕಂಡ ಕಾರ್ಯಕ್ರಮ / ಯೋಜನೆಗಳಡಿ ಹಾಸನ ಜಿಲ್ಲೆಯ ಗ್ರಾಮ ಪಂಚಾಯತಿಗಳಿಗೆ ಕಳೆದ 3 ವರ್ಷಗಳಲ್ಲಿ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನ, ಇದರಲ್ಲಿ ಖರ್ಚಾದ ಅನುದಾನ ಮತ್ತು ಫಲಾನುಭವಿ ವಿವರಗಳೊಂದಿಗೆ ಗ್ರಾಮ ಪಂಚಾಯಿತಿವಾರು ವಿವರವನ್ನು ಅನುಬಂಧ-1 ರಲ್ಲಿ ಮಾನ್ಯ ಸದಸ್ಯರಿಗೆ ಪ್ರತ್ಯೇಕವಾಗಿ ಸಿ.ಡಿ. ಮೂಲಕ ನೀಡಿದೆ.
ಇ	ಕಳೆದ 3 ವರ್ಷಗಳಲ್ಲಿ ಈ ಗ್ರಾಮ ಪಂಚಾಯಿತಿಗಳು ಕರಗಳ ರೂಪದಲ್ಲಿ ಸಾರ್ವಜನಿಕರಿಂದ ಸ್ವೀಕರಿಸಿರುವ ಆದಾಯವೆಷ್ಟು; ಈ ಆದಾಯವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ; ಗ್ರಾಮ ಪಂಚಾಯಿತಿವಾರು ವಿವರ ನೀಡುವುದು.	ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯ ಗ್ರಾಮ ಪಂಚಾಯತಿಗಳು ತೆರಿಗೆ ರೂಪದಲ್ಲಿ ಸಾರ್ವಜನಿಕರಿಂದ ಸ್ವೀಕರಿಸಿರುವ ಆದಾಯದ ವಿವರವನ್ನು ಗ್ರಾಮ ಪಂಚಾಯತಿವಾರು ಅನುಬಂಧ-2 ರಲ್ಲಿ ಮಾನ್ಯ ಸದಸ್ಯರಿಗೆ ಪ್ರತ್ಯೇಕವಾಗಿ ಸಿ.ಡಿ. ಮೂಲಕ ನೀಡಿದೆ. ತೆರಿಗೆ ರೂಪದಲ್ಲಿ ಗ್ರಾಮ ಪಂಚಾಯತಿಗಳು ಸ್ವೀಕರಿಸಿದ ಹಣವನ್ನು ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನ ಪಾವತಿ, ಆಡಳಿತಾತ್ಮಕ ವೆಚ್ಚ, ಕುಡಿಯುವ ನೀರು, ವಿದ್ಯುತ್ ಬಿಲ್ ಮೊತ್ತ, ರಸ್ತೆ, ಚರಂಡಿ ನಿರ್ವಹಣೆ ಮತ್ತು ಇತರೆ ಉದ್ದೇಶಗಳಿಗಾಗಿ ವೆಚ್ಚ ಮಾಡಲಾಗಿದೆ.
ಈ	ಹಾಸನ ಜಿಲ್ಲೆಯ ಯಾವ ಗ್ರಾಮ ಪಂಚಾಯಿತಿಗಳು ಸ್ವಂತ ಕಟ್ಟಡಗಳನ್ನು ಹೊಂದಿವೆ; ಯಾವ ಗ್ರಾಮ ಪಂಚಾಯಿತಿಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ಮತ್ತು ಇದಕ್ಕೆ ಪಾವತಿಸುತ್ತಿರುವ ಬಾಡಿಗೆ ಮೊತ್ತವೆಷ್ಟು; ಗ್ರಾಮ ಪಂಚಾಯಿತಿವಾರು ವಿವರ ನೀಡುವುದು?	ಹಾಸನ ಜಿಲ್ಲೆಯಲ್ಲಿ ಒಟ್ಟು 267 ಗ್ರಾಮ ಪಂಚಾಯತಿಗಳಿದ್ದು, 260 ಗ್ರಾಮ ಪಂಚಾಯತಿಗಳು ಸ್ವಂತ ಕಟ್ಟಡ ಹೊಂದಿರುತ್ತವೆ. ಅರಕಲಗೂಡು ತಾಲ್ಲೂಕಿನ 6 ಗ್ರಾಮ ಪಂಚಾಯತಿಗಳು ಪರ್ಯಾಯ ಸರ್ಕಾರಿ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. ಹಾಸನ ತಾಲ್ಲೂಕಿನ ಗಾಡೇನಹಳ್ಳಿ ಗ್ರಾಮ ಪಂಚಾಯತಿಯು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಮಾಸಿಕವಾಗಿ ರೂ.5000/- ಬಾಡಿಗೆಯನ್ನು ಪಾವತಿಸುತ್ತಿದೆ.

ಸಂ. ಗ್ರಾಅಪ 259 ಗ್ರಾಪಂಅ 2020

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.